ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Mimesis Wind Energy Private Limited ಕಂಪನಿಗೆ ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕಿನ ಗೋಜನೂರು, ರಾಮಗೇರಿ ಮತ್ತು ಲಕ್ಷ್ಮೇಶ್ವರ್ ಗ್ರಾಮದಲ್ಲಿ 2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಹಂಚಿಕೆ ಆದೇಶ ನೀಡುವ ಬಗ್ಗೆ.

ಓದಲಾಗಿದೆ:
1 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ:KRED/08/MWEPL-2 MW/ DESAIBANA/GADA/2015/M-1300.
2 ದಿನಾಂಕ: 27.02.2016 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

* * *

**ಪ್ರಸ್ತಾವನೆ :-**

M/s Mimesis Wind Energy Private Limited ಕಂಪನಿಗೆ ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕಿನ ಗೋಜನೂರು, ರಾಮಗೇರಿ ಮತ್ತು ಲಕ್ಷ್ಮೇಶ್ವರ್ ಗ್ರಾಮದಲ್ಲಿ 2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧವಾಗಿ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಕ್ರೆಡಲ್‌ಗೆ ಸಲ್ಲಿಸಿರುತ್ತಾರೆ. M/s Mimesis Wind Energy Private Limited ಕಂಪನಿಗೆ ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕಿನ ಗೋಜನೂರು, ರಾಮಗೇರಿ ಮತ್ತು ಲಕ್ಷ್ಮೇಶ್ವರ್ ಗ್ರಾಮದಲ್ಲಿ 2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಮಂಜೂರಾತಿ ಬಗ್ಗೆ ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸುವ ಸಲುವಾಗಿ, ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಹಾಗೂ ಇನ್ನಿತರೆ ವಿವರಗಳೊಂದಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (1) ರನ್ವಯ ಏಕ ಕಡತ ಪದ್ಧತಿಯಡಿಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಬೆಂಗಳೂರು ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (2) ರನ್ವಯ ದಿನಾಂಕ :27.02.2016 ರಂದು ನಡೆದ ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸಲಾಗಿತ್ತು, ಈ ಪ್ರಸ್ತಾವನೆಯನ್ನು ಸಮಿತಿಯು ಕೂಲಂಕಷವಾಗಿ ಪರಿಶೀಲಿಸಿ, M/s Mimesis Wind Energy Private Limited ಕಂಪನಿಗೆ ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕಿನ ಗೋಜನೂರು, ರಾಮಗೇರಿ ಮತ್ತು ಲಕ್ಷ್ಮೇಶ್ವರ್ ಗ್ರಾಮದಲ್ಲಿ 2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಅನುಷ್ಠಾನಕ್ಕಾಗಿ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಕ್ರೆಡಲ್‌ಗೆ ಸಲ್ಲಿಸಿರುವುದನ್ನು ಪರಿಗಣಿಸಿ, ಸದರಿ ಕಂಪನಿಗೆ 2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲು ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ **ಆದೇಶ ಸಂಖ್ಯೆ : ಇಎನ್ 167 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ : 18.07.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರವು, M/s Mimesis Wind Energy Private Limited ಕಂಪನಿಗೆ ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕಿನ ಗೋಜನೂರು, ರಾಮಗೇರಿ ಮತ್ತು ಲಕ್ಷ್ಮೇಶ್ವರ್ ಗ್ರಾಮದಲ್ಲಿ 2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು **ಹಂಚಿಕೆ** ಮಾಡಿ ಆದೇಶಿಸಲಾಗಿದೆ.

MD KREDL

Suresh
(Tech) I/C

Geographical area description for 2 MW capacity wind power project

| Sl. No. | Toposheet No. | Proposed Enhaced capacity in MW | Near by villages of the proposed area and district | Geographical Area description of the Project |
|---|---|---|---|---|
| 1 | 48 M/8 | 2 MW (1 Nos x 2.0 MW) | Gojanur, Ramageri and Lakshmeshwar Villages of Shirahatti Taluk, Gadag District. | The Proposed area is a ground level plain and has presence of telephone line and main power line. Area is mostly private land and has agriculture activities. The area is surrounded by the points A, B, C, D, E, F,G, H and held in the following Geographical co-ordinates as:<br>Point A : 15°7'58.67" N Long :75°25'0" E<br>Point B : 15°10'36.06" N Long :75°25'0" E<br>Point C : 15°10'36.06" N Long :75°27'15.73" E<br>Point D : 15°11'58.02" N Long :75°27'15.73" E<br>Point E : 15°11'59.66" N Long :75°28'49.58" E<br>Point F : 15°10'36.06" N Long :75°28'46.23" E<br>Point G : 15°10'34.42" N Long :75°28'26.12" E<br>Point H : 15°7'58.67" N Long :75°28'26.12" E<br>**peaks:** 637, 655, 657, 667, 687, 665 and 708 m Amsl. |
| | Total | 2 MW | | |

ಷರತ್ತುಗಳು / ನಿಬಂಧನೆಗಳು:-

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ : 06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ, ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಯೋಜನಾ ಅನುಷ್ಠಾನ ಪ್ರದೇಶದಲ್ಲಿನ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಯೊಂದಿಗೆಯೇ ವಿದ್ಯುತ್ ಖರೀದಿ ಒಡಂಬಡಿಕೆಯನ್ನು ಮಾಡಿಕೊಳ್ಳಲು ಮತ್ತು ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಸ್ವಂತ ಬಳಕೆ ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿದೆ.

7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಸಹಕರಿಸುವುದು.

8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದು ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

9 ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಟಿಪಿಆರ್ ವೆಚ್ಚ ಹಾಗೂ ಇನ್ನಿತರೆ ಯಾವುದೇ ರೀತಿಯ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಂದಾಯ ಮಾಡತಕ್ಕದ್ದು.

10 ಕರ್ನಾಟಕ ಭೂಸುಧಾರಣಾ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.

11 ಈ ಯೋಜನೆಗೆ ಸರ್ಕಾರದ ಕೈಗಾರಿಕ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಅನ್ವಯವಾಗುತ್ತವೆ.

ಸದರಿ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎ.ಎ.ಚಪ್ಪರಬಂದ್)**,
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

18.07

<u>ಇವರಿಗೆ:</u>

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

<u>ಪ್ರತಿ:</u>

1 ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.
2 ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು - 560001
3 ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು - 560001.
4 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-1.
5 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
6 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ,ಬೆಂಗಳೂರು-9.
7 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ,ಬೆಂಗಳೂರು-1.
8 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಹುಬ್ಬಳ್ಳಿ
9 ಜಿಲ್ಲಾಧಿಕಾರಿ, ಗದಗ ಜಿಲ್ಲೆ, ಗದಗ.
10 ಉಪ ಅರಣ್ಯ ಸಂರಕ್ಷಣಾಧಿಕಾರಿ, ಗದಗ ಪ್ರಾದೇಶಿಕ ವಿಭಾಗ, ಗದಗ.
11 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
12 M/s Mimesis Wind Energy Private Limited., No.12/1, Next to Canara Bank, Bellary Road, Hebbal, Bangalore-560 024.
13 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹಿರಿಯ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
14 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
15 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.